**<u>ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಬನಹಟ್ಟಿ</u>**

**<u>ಸಿ.ಸಿ.ನಂ.1/2021</u>**

ಅಸಾಃ2 (ಚಾಸಾ-2)

| | |
|---|---|
| ಹೆಸರು | ಬಸಪ್ಪ ಮಾಂಗ |
| ತಂದೆಯ /ಗಂಡನ ಹೆಸರು | ಶಂಕರೆಪ್ಪ |
| ವಯಸ್ಸು | 38 ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಗೋಲಬಾಂವಿ |

ದಿನಾಂಕ 30-10-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರವರಿಂದ:-</u>**

ನನಗೆ ಚಾಸಾ-3 ರವರ ಪರಿಚಯ ಇದೆ. ಚಾಸಾ-1 ಮತ್ತು ಆರೋಪಿಯ ಪರಿಚಯ ಇರುವದಿಲ್ಲ. ದಿನಾಂಕ 02-09-2020 ರಂದು ಚಿಮ್ಮಡ ಮಹಾಲಿಂಗಪೂರ ರಸ್ತೆಯಲ್ಲಿ ಒಂದು ಅಪಘಾತವಾಗಿದೆ ಎಂದು ಪೋಲಿಸರು ಪಂಚನಾಮೆ ಮಾಡಲು ಬಂದಾಗ ನನ್ನ ಸಹಿಯನ್ನು ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವದಿಲ್ಲ. ಅಪಘಾತ ಪಡಿಸಿದ ವಾಹನದ ಚಾಲಕನ ಹೆಸರು ಮತ್ತು ವಾಹನದ ನಂಬರ ನನಗೆ ಗೊತ್ತಿರುವದಿಲ್ಲ.ಆರೋಪಿಯ ಮೇಲೆ ಏನು ಪ್ರಕರಣ ದಾಖಲಾಗಿದೆ ಎಂದು ನನಗೆ ಗೊತ್ತಿರುವದಿಲ್ಲ.

ಈ ಹಂತದಲ್ಲಿ ಸಾಕ್ಷಿಗೆ 01 ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆ ಸ್ಥಳ ಪಂಚನಾಮೆ ಇದ್ದು ಅದನ್ನು ನಿಪಿ-2 ಎಂದು 2 ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಸಾಕ್ಷಿ ತಾನು ಇರುವ ಎರಡು ಪೋಟೋಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-3 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ವಿನಂತಿಸಿದ್ದರಿಂದ ಅನುಮತಿಸಲಾಯಿತು)

**<u>ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿನಾಂಕ 02-09-2020 ರಂದು ಮದ್ಯಾಹ್ನ 03-30 ರಿಂದ 04-30 ಗಂಟೆ ವರೆಗೆ ಚಾಸಾ-9

ರವರು ತೋರಿಸಿದ ಸ್ಥಳದಲ್ಲಿ ಪೋಲಿಸರು ನನ್ನ ಮತ್ತು  ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಪಂಚನಾಮೆ ಮಾಡಿ, ನಿಪಿ-3 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.  ನನಗೆ ನಿಪಿ-2 ಮತ್ತು 3 ರಲ್ಲಿರುವ ಎಲ್ಲ ಸಂಗತಿಗಳು ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ  ಆರೋಪಿ  ಪರ ಶ್ರೀಎಸ್ ಬಿ ಜೆ  ವಕೀಲರಿಂದ:- ಇಲ್ಲಾ .**

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇ.ಕೇ.ಸರಿ ಅದೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ. ದಂ., ಬನಹಟ್ಟಿ.**